# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 11.08.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ತ್ರಿವೇಣಿ ಎನ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಕೆ ಪ್ರಭುದಾಸ್ | ಕಂದಾಯ ವಸೂಲಿಗಾರರು |
| 6 | ದಿವಾಕರ್ ಎಂ | ಕಂದಾಯ ವಸೂಲಿಗಾರರು |
| 7 | ಹೆಚ್ ನಾಗೇಂದ್ರ ರಾವ್ | ಕಂದಾಯ ವಸೂಲಿಗಾರರು |
| 8 | ರಂಗರಾಜು | ಸದಸ್ಯರು |

-:ನಡಾವಳಿಯ ವರದಿ:-

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದನೋಡಲ್ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತಕೋರಿದರು.

**<u>ವಿಷಯ ಸಂಖ್ಯೆ: 1:-</u> ಜಿ.ಕೆ.ಡಬ್ಲ್ಯೂ ಬಡಾವಣೆಯ ಉದ್ಯಾನವನದಲ್ಲಿ Children Play Equipment ಗಳನ್ನು ದುರಸ್ತಿಪಡಿಸುವ ಬಗ್ಗೆ**

ಸದಸ್ಯರಾದ ರಂಗರಾಜು ರವರು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯಲ್ಲಿ ಬರುವ ಜಿ.ಕೆ.ಡಬ್ಲ್ಯೂ ಬಡಾವಣೆಯ ಉದ್ಯಾನವನದಲ್ಲಿ ಅಳವಡಿಸಿದ್ದ **Children Play Equipment** ಗಳು ಹಾಳಾಗಿದ್ದು, ಇವುಗಳನ್ನು ದುರಸ್ತಿಪಡಿಸುವಂತೆ ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ಉದ್ಯಾನವನಗಳ ನಿರ್ವಹಣೆ ಕಾರ್ಯವು ದಾಸರಹಳ್ಳಿ ಯೋಜನಾ ವಿಭಾಗ ಶಾಖೆಗೆ ಸಂಬಂಧಿಸಿದ್ದು, ಸದರಿಯವರಿಗೆ ಈ ಬಗ್ಗೆ ಗಮನ ಸೆಳೆದು ಅಗತ್ಯ ಕ್ರಮ ವಹಿಸಲು ತಿಳಿಸುವುದಾಗೀ ಸಭೆಯಲ್ಲಿ ತಿಳಿಸಿದರು.

**ವಿಷಯ ಸಂಖ್ಯೆ: 2 :- ವಿದ್ಯುತ್ ಬೀದಿದೀಪಗಳ ಉರಿಯುತ್ತಿಲ್ಲದಿರುವುದರ ಬಗ್ಗೆ**

ಸದಸ್ಯರಾದ ರಂಗರಾಜು ರವರು ಮಾತನಾಡಿ ವಾರ್ಡ್ 70ರ ವ್ಯಾಪ್ತಿಯ ಕೆ.ಟಿ.ಜಿ ಮುಖ್ಯರಸ್ತೆಯಲ್ಲಿ ಬೀದಿದೀಪಗಳು ಉರಿಯುತ್ತಿಲ್ಲ. ಈ ಬಗ್ಗೆ ಕ್ರಮವಹಿಸಲು ಕೋರಿದರು.

ಇದಕ್ಕೆ ಪ್ರತಿಕ್ರಿಯಿಸಿದ ನೋಡಲ್ ಅಧಿಕಾರಿಗಳುಡಿ ಸಂಬಂಧಪಟ್ಟ ಕಾರ್ಯಪಾಲಕ ಅಭಿಯಂತರರಿಗೆ ಕರೆಮಾಡಿ ಸದರಿ ಸಮಸ್ಯೆಯನ್ನು ಪರಿಹರಿಸುವಂತೆ ತಿಳಿಸಲಾಯಿತು. ಸದರಿಯವರು ಅಗತ್ಯ ಕ್ರಮವಹಿಸುವುದಾಗೀ ತಿಳಿಸಿದರು.

**ವಿಷಯ ಸಂಖ್ಯೆ: 3 :- ವಿವಿಧ ಇಲಾಖೆಗಳಿಗೆ ಸಂಬಂಧ ಪಟ್ಟ ಅಧಿಕಾರಿಗಳು ಸಭೆಗೆ ಗೈರು ಆಗುತ್ತಿರುವ ಬಗ್ಗೆ**

ಸದಸ್ಯರೆಲ್ಲರು ಮಾತನಾಡಿ, ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಕೆಲವು ಅಧಿಕಾರಿಗಳು ಸಭೆಗೆ ಹಾಜರಾಗುತ್ತಿಲ್ಲವಾದ್ದರಿಂದ ಸಾರ್ವಜನಿಕರ ಕುಂದು ಕೊರತೆಗಳನ್ನು ಸದರಿಯವರ ಸಮ್ಮುಖದಲ್ಲಿ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ ಆದ್ದರಿಂದ ಮುಂದಿನ ಸಭೆಗಳಲ್ಲಿ ಎಲ್ಲರೂ ಹಾಜರಾಗುವಂತೆ ಕ್ರಮಮವಹಿಸಲು ಕೋರಿದರು.

ಈ ಬಗ್ಗೆ ನೋಡಲ್ ಅಧಿಕಾರಿಗಳು ಪ್ರತಿಕ್ರಿಯಿಸಿ, ಗೈರು ಆಗುತ್ತಿರುವ ಅಧಿಕಾರಿಗಳಿಗೆ ನೋಟೀಸ್ ನೀಡಲು ಹಾಗೂ ಗೈರಿನ ಸಂಬಂಧ ಸಭೆಯ ನಡವಳಿಯಲ್ಲಿ ದಾಖಲಿಸಲು ಕಾರ್ಯದರ್ಶೀ ಯವರಿಗೆ ಸೂಚಿಸಿದರು.

**ವಿಷಯ ಸಂಖ್ಯೆ: 4 :- ಬಿ ಖಾತೆಗೆ ಸಲ್ಲಿಸಬೇಕಾಗಿರುವ ವಿವರಗಳನ್ನು ಸೂಚನಾ ಫಲಕಗಳಲ್ಲಿ ಅಳವಡಿಸುವ ಬಗ್ಗೆ.**

ಸದಸ್ಯರಾದ ರಂರರಾಜು ರವರು ಮಾತನಾಡಿ, ಬಿ ಖಾತೆಯನ್ನು ಪಡೆಯಲು ಸಲ್ಲಿಸಬೇಕಾಗಿರುವ ದಾಖಲೆಗಳ ವಿವರಗಳನ್ನು ಕಛೇರಿಯ ಆವರಣದ ಸೂಚನಾ ಫಲಕಗಳಲ್ಲಿ ಕನ್ನಡದಲ್ಲಿ ಅಳವಡಿಸುವಂತೆ ಕೋರಿದರು.

ಇದಕ್ಕೆ ಕಂದಾಯ ವಸೂಲಿಗಾರರಾದ ಪ್ರಭುದಾಸ್ ರವರು ಮಾತನಾಡಿ, ಬಿ ಖಾತೆಗೆ ಸಲ್ಲಿಸಬೇಕಾಗಿರುವ ದಾಖಲೆಗಳ ಮಾಹಿತಿಯನ್ನು ಕನ್ನಡದಲ್ಲಿ ಅಳವಡಿಸುವ ಸಂಬಂಧ ಸಹಾಯಕ ಕಂದಾಯ ಅಧಿಕಾರಿರವರ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವುದಾಗೀ ತಿಳಿಸಿದರು.

**ವಿಷಯ ಸಂಖ್ಯೆ: 5:-BBMP SAHAYA APP:**

- ಅವೀಶ್ ಹೆಚ್ ಎಂ, ಸಹಾಯಕ ಅಭಿಯಂತರರು, ವಾರ್ಡ್ ನಂ.70 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ಶಿವಲಿಂಗಯ್ಯ.ಕೆ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಪ್ರತಿಯನ್ನು:**

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ